ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ರಾಜ್ಯದ ಜಿಲ್ಲಾಧಿಕಾರಿಗಳ ಕಛೇರಿಯ ಕಂದಾಯ ಅಫೀಲುಗಳ ಕುರಿತು

ಶ್ರೀಹೆಚ್.ಎಂ.ರಮೇಶಗೌಡ(ವಿಧಾನಸಭೆಯಿಂದಚುನಾಯಿತರಾದವರು):-

290 (311) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಅನೇಕ ಜಿಲ್ಲಾಧಿಕಾರಿಗಳ ಕಛೇರಿಯ ಅಸಂಖ್ಯಾತ ಕಂದಾಯ ಅಫೀಲು ಪ್ರಕರಣಗಳಿದ್ದರೂ ಜಿಲ್ಲಾಧಿಕಾರಿಗಳು ನಿಗಧಿತ ಸಮಯದಲ್ಲಿ ಮುತುವರ್ಜಿ ವಹಿಸಿ ಇತ್ಯರ್ಥ ಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದಿಯೆ; ಬಂದಿದ್ದರೆ, ಅದನ್ನು ನಿಭಾಯಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಕಂದಾಯ ನ್ಯಾಯಾಲಯಗಳಲ್ಲಿನ ಪ್ರಕರಣಗಳನ್ನು ಶೀಘ್ರ ಇತ್ಯರ್ಥಪಡಿಸಲು ವಿಶೇಷ ರೆವಿನ್ಯೂ ನ್ಯಾಯಲಯಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದರೆ, ಎಷ್ಟು ದಿನದೊಳಗೆ ರಚಿಸಲಾಗುವುದು ?